ಮುನಿರಾಬಾದ್‌ದಿಂದ ಮಹಬೂಬ್ ನಗರ ರೈಲ್ವೆ ಯೋಜನೆ

1343 (1626) ಶ್ರೀ ಹಂಪನಗೌಡ ಬಾದರ್ಲಿ (ಸಿಂಧನೂರು): ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ ಹಾಗೂ ನಾಗರೀಕ ವಿಮಾನಯಾನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮುನಿರಾಬಾದ್‌ದಿಂದ ಮಹಬೂಬ್‌ನಗರ ರೈಲ್ವೆ ಯೋಜನೆಯನ್ನು ಕರ್ನಾಟಕ ರೈಲ್ವೆ ಅಭಿವೃದ್ಧಿ ನಿಗಮದಲ್ಲಿ ಸೇರಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ?

ಶ್ರೀ ಟಿ. ಜಾನ್ (ಮೂಲ ಸೌಲಭ್ಯ ಅಭಿವೃದ್ಧಿ ಹಾಗೂ ನಾಗರೀಕ ವಿಮಾನಯಾನ ರಾಜ್ಯ ಸಚಿವರು) :

ಅ) ಮುನಿರಾಬಾದ್ ಮಹಬೂಬ್ ನಗರ ರೈಲ್ವೆ ಯೋಜನೆಯು ಕೆ ರೈಡ್ ಯೋಜನೆಗಳ ವ್ಯಾಪ್ತಿಯೊಳಗೆ ಬರುವುದಿಲ್ಲ.

ನಂಜುಂಡಪ್ಪನವರ ಪ್ರಾದೇಶಿಕ ಅಸಮತೋಲನಾ ವರದಿಯ ಶಿಫಾರಸ್ಸುಗಳನ್ನು ಜಾರಿಗೊಳಿಸುವುದು

1344 (1627) ಶ್ರೀ ಹಂಪನಗೌಡ ಬಾದರ್ಲಿ (ಸಿಂಧನೂರು): ಮಾನ್ಯ ಯೋಜನಾ, ಸಾಂ.ಹ. ಮತ್ತು ಸಾಂಖ್ಯಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಡಾ: ನಂಜುಂಡಪ್ಪನವರ ಪ್ರಾದೇಶಿಕ ಅಸಮತೋಲನಾ ವರದಿಯ ಶಿಫಾರಸ್ಸುಗಳನ್ನು ಜಾರಿಗೆ ತರುವ ಉದ್ದೇಶ ಸರ್ಕಾರಕ್ಕೆ ಇದೆಯೇ?

ಆ) ವರದಿಯಲ್ಲಿ ಸೂಚಿಸಿರುವ ಆರ್ಥಿಕ ಸಾಮಾಜಿಕ, ಶೈಕ್ಷಣಿಕ ಸುಧಾರಣೆ ಹಾಗೂ ವ್ಯವಸಾಯ ಕ್ಷೇತ್ರದ ಅಭಿವೃದ್ಧಿಗೆ ಈ ಸಾಲಿನಲ್ಲಿ ಆರ್ಥಿಕ ಸಂಪನ್ಮೂಲ ಒದಗಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ?

ಶ್ರೀ ಆರ್.ಟಿ.ತಿಮ್ಮಾಪೂರ್ (ಯೋಜನಾ, ಸಾಂ.ಹ. ಮತ್ತು ಸಾಂಖ್ಯಿಕ ಸಚಿವರು):

ಅ) ಪ್ರಾದೇಶಿಕ ಅಸಮತೋಲನ ನಿವಾರಣಾ ಉನ್ನತಾಧಿಕಾರ ಸಮಿತಿಯ ಶಿಫಾರಸ್ಸುಗಳನ್ನು ಪರಿಶೀಲಿಸಲು ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಉಪ ಸಮಿತಿಯನ್ನು ರಚಿಸಲಾಗುತ್ತಿದೆ.

ಆ) ಪ್ರಶ್ನೆ ಸಂಖ್ಯೆ (ಅ) ಗೆ ನೀಡಿರುವ ಉತ್ತರದ ಪ್ರಕಾರ ಈ ಪ್ರಶ್ನೆಗೆ ಉತ್ತರ ನೀಡುವ ಅವಶ್ಯಕತೆ ಉದ್ಭವಿಸುವುದಿಲ್ಲ.

ಹೈದ್ರಾಬಾದ್ ಕರ್ನಾಟಕಕ್ಕೆ ವಿಶೇಷ ಸ್ಥಾನಮಾನ

1345 (1628) ಶ್ರೀ ಹಂಪನಗೌಡ ಬಾದರ್ಲಿ (ಸಿಂಧನೂರು): ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಿಂದುಳಿದ ಹೈದರಾಬಾದ್ ಕರ್ನಾಟಕ ಭಾಗಕ್ಕೆ ಸಂವಿಧಾನದ 371ನೇ ಕಲಂನ ಅನ್ವಯ ವಿಶೇಷ ಸ್ಥಾನಮಾನ ಕಲ್ಪಿಸಲು ಕೇಂದ್ರ ಸರ್ಕಾರದಿಂದ ಮಂಜೂರಾತಿ ಪಡೆಯುವ ಬಗ್ಗೆ ಸರ್ಕಾರದ ಉದ್ದೇಶವೇನು? ಈ ಕುರಿತು ಕೈಗೊಂಡ ಕ್ರಮವೇನು?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯ ಮಂತ್ರಿಗಳು) :

ಅ) ಪ್ರಾದೇಶಿಕ ಅಸಮತೋಲನೆಯನ್ನು ನಿವಾರಿಸುವ ಸಲುವಾಗಿ ಸರ್ಕಾರದ ಕೆಲವೊಂದು ಹುದ್ದೆಗಳ ನೇಮಕಾತಿ ಹಾಗೂ ಶಿಕ್ಷಣ ಕ್ಷೇತ್ರದಲ್ಲಿ ಪ್ರಾಂತ್ಯವಾರು ಮೀಸಲಾತಿ ನೀಡುವ ಉದ್ದೇಶದಿಂದ ಭಾರತ ಸಂವಿಧಾನದ ಅನುಚ್ಛೇದ 371 ಕ್ಕೆ ತಿದ್ದುಪಡಿ ತರುವಂತೆ ಕೋರಿ ಕೇಂದ್ರ ಸರ್ಕಾರಕ್ಕೆ